**ಮಾನ್ಯ ವಿಧಾನಪರಿಷತ್ತಿನ ಸದಸ್ಯರಾದ ಶ್ರೀ ಐವನ್ ಡಿ'ಸೋಜಾ (ವಿದಾನಸಭೆಯಿಂದ ಚುನಾಯಿತರಾದವರು) ರವರ ನಿಯಮ 72ರ ಗಮನ ಸೆಳೆಯುವ ಸೂಚನೆಗೆ ಸರ್ಕಾರದ ಉತ್ತರ**

**ಸೂಚನೆ**

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದಲ್ಲಿ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳನ್ನು ಖಾಸಗಿ ಕಾಲೇಜುಗಳಿಂದ ನಿಯೋಜನೆ ಮೇಲೆ ಕರ್ತವ್ಯಕ್ಕೆ ನೇಮಿಸಿಕೊಂಡು ಅವರಿಂದ ಕರ್ತವ್ಯದಿಂದ ಸೇವೆ ಪಡೆಯಲಾಗುತ್ತಿದ್ದು, ಅವಧಿ ಮೀರಿದ್ದರೂ ಅಲ್ಲಿಯೇ ಸೇವೆಯಲ್ಲಿ ಮುಂದುವರೆಯುತ್ತಿದ್ದು, ಇನ್ನೂ ಕೆಲವರು ತಮ್ಮ ಕರ್ತವ್ಯವನ್ನು ಮರೆತು ಅನ್ಯ ಚಟುವಟಿಕೆಗಳಲ್ಲಿ ಭಾಗವಹಿಸುತ್ತಿರುವುದಾಗಿ ದೂರು ಬಂದಿವೆ. ಇಂತಹ ಸಿಬ್ಬಂದಿಗಳನ್ನು ಕರ್ತವ್ಯದಿಂದ ಬಿಡುಗಡೆಗೊಳಿಸುವ ಸಾರ್ವಜನಿಕ ಮಹತ್ವದ ವಿಷಯದ ಬಗ್ಗೆ ನಿಯಮ 72 ರಲ್ಲಿ ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುತ್ತೇನೆ.

**ಉತ್ತರ**

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದಲ್ಲಿ ಆಯಾ ವಿಭಾಗಗಳಲ್ಲಿನ ಅವಶ್ಯಕತೆಗನುಗುಣವಾಗಿ ಆಡಳಿತಾತ್ಮಕ ಹಿತದೃಷ್ಟಿಯಿಂದ ಕುಲಪತಿಗಳ ಅನುಮೋದನೆಯ ಮೇರೆಗೆ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಸಂಯೋಜಿತ ಮಹಾವಿದ್ಯಾಲಯಗಳ (Affiliated Colleges) ಪ್ರಾಚಾರ್ಯರಿಂದ ಒಪ್ಪಿಗೆ ಪಡೆದು ಬೋಧಕ/ಬೋಧಕೇತರ ಸಿಬ್ಬಂದಿಗಳನ್ನು ನಿಯೋಜನೆಯ ಮೇರೆಗೆ ಕರ್ತವ್ಯಕ್ಕೆ ನೇಮಿಸಿಕೊಳ್ಳಲಾಗಿದೆ.

ಈ ರೀತಿ ನಿಯೋಜನೆ ಮೇಲೆ ನೇಮಕ ಮಾಡಿಕೊಳ್ಳಲಾದ ನೌಕರರ ಪೈಕಿ ಹಾಲಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದಲ್ಲಿ 03 ಬೋಧಕೇತರ ಸಿಬ್ಬಂದಿಗಳು 05 ವರ್ಷಗಳ ಅವಧಿ ಮೀರಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಆದರೆ ಸದರಿ ಸಿಬ್ಬಂದಿಗಳು ತಮ್ಮ ಕರ್ತವ್ಯವನ್ನು ಮರೆತು ಅನ್ಯ ಚಟುವಟಿಕೆಗಳಲ್ಲಿ ಭಾಗವಹಿಸುತ್ತಿರುವುದಿಲ್ಲ. ಹಾಗೂ ಈ ರೀತಿಯ ಯಾವುದೇ ದೂರುಗಳು ವಿಶ್ವವಿದ್ಯಾಲಯದಲ್ಲಿ ಸ್ವೀಕೃತವಾಗಿರುವುದಿಲ್ಲ.

**ಸಂಖ್ಯೆ:ಇಡಿ 378 ಟಿಇಸಿ 2025**

Sudhakar M.C.

**(ಡಾ|| ಎಂ.ಸಿ.ಸುಧಾಕರ್)**

**ಉನ್ನತ ಶಿಕ್ಷಣ ಸಚಿವರು**